ರೋಮಾಪುರದವರಿಗೆ 6:23 ಯಾಕಂದರೆ ಪಾಪದ ಸಂಬಳ ಮರಣ. ಆದರೆ ದೇವರ ದಾನವು ನಮ್ಮ ಕರ್ತನಾದ ಯೇಸು ಕ್ರಿಸ್ತನ ಮುಖಾಂತರ ನಿತ್ಯಜೀವವು.

ರೋಮಾಪುರದವರಿಗೆ 8:2 ಜೀವವನ್ನುಂಟು ಮಾಡುವ ಆತ್ಮನ ನಿಯಮವು ಕ್ರಿಸ್ತ ಯೇಸುವಿನಲ್ಲಿ ನನ್ನನ್ನು ಪಾಪ ಮರಣಗಳ ನಿಯಮ ದಿಂದ ಬಿಡಿಸಿತು.

2 ತಿಮೊಥೆಯನಿಗೆ 1:10 ಈಗ ನಮ್ಮ ರಕ್ಷಕನಾದ ಯೇಸು ಕ್ರಿಸ್ತನ ಪ್ರತ್ಯಕ್ಷತೆಯ ಮೂಲಕ ಅದನ್ನು ಪ್ರಕಾಶ ಪಡಿಸಿದ್ದಾನೆ. ಈತನು ಮರಣವನ್ನು ನಿವೃತ್ತಿ ಮಾಡಿ ಸುವಾರ್ತೆಯ ಮೂಲಕ ಜೀವವನ್ನೂ ನಿರ್ಲಯತ್ವ ವನ್ನೂ ಪ್ರಕಾಶಗೊಳಿಸಿದನು.

ಯೋಬನು 5:2 ಮೂಢನನ್ನು ಕೋಪವು ಕೊಲ್ಲು ವದು; ಬುದ್ಧಿಹೀನನನ್ನು ರೋಷವು ಸಾಯುವಂತೆ ಮಾಡುವದು.

ಹೋಶೇ 13:14 ನಾನು ಸಮಾಧಿಯ ಶಕ್ತಿಯಿಂದ ಅವರನ್ನು ಈಡು ಕೊಟ್ಟು ವಿಮೋಚಿಸುವೆನು; ಮರಣದಿಂದ ಅವರನ್ನು ಬಿಡಿಸುವೆನು. ಓ ಮರಣವೇ, ನಾನು ನಿನ್ನ ಬಾಧೆಗ ಳಾಗಿರುವೆನು; ಓ ಸಮಾಧಿಯೇ, ನಾನು ನಿನ್ನ ನಾಶನ ವಾಗಿದ್ದೇನೆ; ಪಶ್ಚಾತ್ತಾಪವು ನನ್ನ ಕಣ್ಣುಗಳಿಂದ ಮರೆ ಯಾಗಿದೆ.

ಕೀರ್ತನೆಗಳು 9:13 ಓ ಕರ್ತನೇ, ನನ್ನ ಮೇಲೆ ಕರುಣೆತೋರಿಸು; ನನ್ನನ್ನು ಹಗೆಮಾಡುವವರಿಂದ ನನಗೆ ಬಂದ ಶ್ರಮೆ ಯನ್ನು ನೋಡು. ಮರಣದ ಬಾಗಲುಗಳಿಂದ ನನ್ನನ್ನು ಎತ್ತುವಾತನೇ,

ಯೋಬನು 6:26 ಗಾಳಿಯ ಹಾಗಿರುವ ಮಾತುಗಳನ್ನೂ ದಿಕ್ಕಿಲ್ಲದವನ ನುಡಿಗಳನ್ನೂ ಗದರಿಸು ವದಕ್ಕೆ ನೀವು ಯೋಚಿಸುತ್ತೀರೋ?

ಯೋಬನು 33:22 ಹೌದು, ಅವನ ಆತ್ಮವು ಸಮಾಧಿಗೂ ಅವನ ಪ್ರಾಣವು ನಾಶಮಾಡುವವರ ಸಮಿಾಪಕ್ಕೂ ಎಳೆಯಲ್ಪ ಡುತ್ತದೆ.

ಯೆಹೆಜ್ಕೇಲನು 37:12,13 ಆದದರಿಂದ ನೀನು ಪ್ರವಾದಿಸು ಮತ್ತು ಅವರಿಗೆ ಹೇಳು--ದೇವರಾದ ಕರ್ತನು ಹೀಗೆ ಹೇಳುತ್ತಾನೆ--ಓ ನನ್ನ ಜನರೇ, ನಾನು ನಿಮ್ಮ ಸಮಾಧಿಗಳನ್ನು ತೆರೆಯುವೆನು ಮತ್ತು ಸಮಾಧಿಗಳಿಂದ ನೀವು ಹೊರಗೆ ಬರುವಂತೆ ಮಾಡುವೆನು. ಇಸ್ರಾ ಯೇಲ್ ದೇಶಕ್ಕೆ ನಿಮ್ಮನ್ನು ತರುವೆನು. 13 ಓ ನನ್ನ ಜನರೇ, ಯಾವಾಗ ನಾನು ನಿಮ್ಮ ಸಮಾಧಿಗಳನ್ನು ತೆರೆದು ಹೊರಗೆ ಬರಮಾಡುವೆನೋ ಆಗ ನಾನೇ ಕರ್ತನೆಂದು ನೀವು ತಿಳಿದುಕೊಳ್ಳುವಿರಿ.

ಮತ್ತಾಯನು 27:52 ಇದಲ್ಲದೆ ಸಮಾಧಿಗಳು ತೆರೆಯಲ್ಪಟ್ಟವು; ಮತ್ತು ನಿದ್ರೆಹೋದ ಅನೇಕ ಭಕ್ತರ ದೇಹಗಳು ಎದ್ದವು.

ಆದಿಕಾಂಡ 2:7 ಕರ್ತನಾದ ದೇವರು ಭೂಮಿಯ ಮಣ್ಣಿನಿಂದ ಮನುಷ್ಯನನ್ನು ರೂಪಿಸಿ ಅವನ ಮೂಗಿನಲ್ಲಿ ಜೀವಶ್ವಾಸ ವನ್ನು ಊದಿದನು; ಆಗ ಮನುಷ್ಯನು ಜೀವಾತ್ಮ ನಾದನು.

ಆದಿಕಾಂಡ 6:17 ಇಗೋ, ನಾನು ನಾನಾಗಿಯೇ ಆಕಾಶದ ಕೆಳಗೆ ಜೀವಶ್ವಾಸವಿರುವವುಗಳನ್ನೆಲ್ಲಾ ನಾಶ ಮಾಡುವದಕ್ಕೆ ಜಲಪ್ರಳಯವನ್ನು ಭೂಮಿಯ ಮೇಲೆ ಬರಮಾಡುತ್ತೇನೆ; ಆಗ ಭೂಮಿಯಲ್ಲಿರುವದೆಲ್ಲಾ ಸತ್ತುಹೋಗುವದು.

ಆದಿಕಾಂಡ 7:15 ಹೀಗೆ ಜೀವಶ್ವಾಸವಿರುವ ಎಲ್ಲಾ ಶರೀರಗಳಲ್ಲಿಯೂ ಎರಡೆರಡು ನೋಹನ ಬಳಿಗೆ ನಾವೆಯೊಳಗೆ ಹೋದವು.

ಆದಿಕಾಂಡ 7:22 ಒಣ ನೆಲದ ಮೇಲಿದ್ದಂಥ ಮೂಗಿನಲ್ಲಿ ಶ್ವಾಸವಿರುವ ವುಗಳೆಲ್ಲಾ ಸತ್ತುಹೋದವು.

ಯೋಬನು 12:10 ಆತನ ಕೈಯಲ್ಲಿ ಎಲ್ಲಾ ಜೀವಿ ಗಳ ಪ್ರಾಣವು ಎಲ್ಲಾ ಮನುಷ್ಯರ ಶ್ವಾಸವೂ ಇವೆ.

ಯೋಬನು 33:4 ದೇವರ ಆತ್ಮನು ನನ್ನನ್ನು ಉಂಟುಮಾಡಿದನು; ಸರ್ವಶಕ್ತನ ಶ್ವಾಸವು ನನಗೆ ಜೀವವನ್ನು ಕೊಟ್ಟಿತು.

ಅಪೊಸ್ತಲರ ಕೃತ್ಯಗ 17:25 ಇಲ್ಲವೆ ತಾನೇ ಎಲ್ಲರಿಗೆ ಜೀವವನ್ನು ಶ್ವಾಸವನ್ನು ಎಲ್ಲವನ್ನು ಕೊಡುವಾತ ನಾಗಿರಲಾಗಿ ಕೊರತೆಯಿದ್ದವನಂತೆ ಮನುಷ್ಯರ ಕೈಗಳಿಂದ ಆರಾಧನೆ ಹೊಂದುವಾತನಲ್ಲ;

ಪ್ರಕಟನೆ 13:15 ಮೃಗದ ವಿಗ್ರಹವು ಮಾತನಾಡುವಂತೆಯೂ ಆ ಮೃಗದ ವಿಗ್ರಹವನ್ನು ಯಾರಾರು ಆರಾಧಿಸುವದಿಲ್ಲವೋ ಅವರನ್ನು ಕೊಲ್ಲಿಸು ವಂತೆಯೂ ಆ ಮೃಗದ ವಿಗ್ರಹಕ್ಕೆ ಜೀವ ಕೊಡುವ ಅಧಿಕಾರವು ಅದಕ್ಕೆ ಇತ್ತು.

ಯೋಹಾನನು 10:10 ಕಳ್ಳನು ಕದ್ದುಕೊಳ್ಳುವದಕ್ಕೂ ಕೊಲ್ಲುವದಕ್ಕೂ ಹಾಳುಮಾಡು ವದಕ್ಕೂ ಮಾತ್ರ ಬರುತ್ತಾನೇ ಹೊರತು ಮತ್ತಾವದಕ್ಕೂ ಬರುವದಿಲ್ಲ; ನಾನಾದರೋ ಅವುಗಳಿಗೆ ಜೀವವು ಇರಬೇಕೆಂತಲೂ ಸಮೃದ್ಧಿಯು ಇರಬೇಕೆಂತಲೂ ಬಂದೆನು.

ಯೆಶಾಯ 28:15 ಮರಣದ ಸಂಗಡ ಒಡಂಬಡಿಕೆಯನ್ನು ಮಾಡಿದ್ದೇವೆ. ಪಾತಾಳದ (ನರಕದ)ಸಂಗಡ ಒಪ್ಪಂದ ಮಾಡಿಕೊಂಡಿದ್ದೇವೆ; ವಿಪರೀತವಾದ ಶಿಕ್ಷೆ ಯು ಹಾದುಹೋಗುವಾಗ ನಮ್ಮ ಮೇಲೆ ಬಾರದು; ಸುಳ್ಳನ್ನು ನಮ್ಮ ಆಶ್ರಯವಾಗಿ ಮಾಡಿಕೊಂಡು ಮೋಸದಲ್ಲಿ ಅಡಗಿಕೊಂಡಿದ್ದೇವೆ ಎಂದು ನೀವು ಅನ್ನುತ್ತೀರಲ್ಲಾ?

ಯೆಶಾಯ 28:18 ಮರಣದೊಂದಿಗೆ ನೀವು ಮಾಡಿಕೊಂಡ ಒಡಂಬಡಿಕೆ ರದ್ದಾಗುವದು. ಪಾತಾಳದ ಸಂಗಡ ನೀವು ಮಾಡಿಕೊಂಡ ಒಪ್ಪಂದವು ನಿಲ್ಲುವದಿಲ್ಲ; ವಿಪರೀತ ಬಾಧೆಯು ಹಾದುಹೋಗುವಾಗ ನೀವು ಅದರಿಂದ ತುಳಿಯಲ್ಪಡುವಿರಿ.

ಯೆಶಾಯ 5:24 ಅವರು ಸೈನ್ಯಗಳ ಕರ್ತನ ನ್ಯಾಯ ಪ್ರಮಾಣವನ್ನು ನಿರಾಕರಿಸಿದ್ದರಿಂದಲೂ ಇಸ್ರಾಯೇ ಲಿನ ಪರಿಶುದ್ಧನ ವಾಕ್ಯವನ್ನು ಅಸಡ್ಡೆಮಾಡಿದ್ದ ರಿಂದಲೂ ಬೆಂಕಿಯು ಕೊಳ್ಳಿಯನ್ನು ನುಂಗಿಬಿಡುವ ಹಾಗೂ ಜ್ವಾಲೆಯು ಹೊಟ್ಟನ್ನು ಸುಟ್ಟುಬಿಡುವಂತೆಯೂ ಅದರ ಬೇರು ಕೊಳೆಯುವಂತೆಯೂ ಚಿಗುರು ಅವರ ಧೂಳಿನಂತೆಯೂ ತೂರಿಹೋಗುವವು.

ಯೋವೇಲ 1:12 ದ್ರಾಕ್ಷೇ ಬಳ್ಳಿ ಒಣಗಿಹೋಗಿದೆ; ಅಂಜೂರದಮರ ಬಾಡಿ ಹೋಗಿದೆ; ದಾಳಿಂಬರದಗಿಡವೂ ಖರ್ಜೂರದ ಗಿಡವೂ ಸೇಬು ಗಿಡವೂ ಹೊಲದ ಮರಗಳೆಲ್ಲವೂ ಒಣಗಿಹೋಗಿವೆ; ಸಂತೋಷವು ಮನುಷ್ಯರ ಪುತ್ರರನ್ನು ಬಿಟ್ಟು ಒಣಗಿಹೋಗಿದೆ.

ಹೋಶೇ 13:15 ಅವನು ತನ್ನ ಸಹೋದರರ ಮಧ್ಯದಲ್ಲಿ ಫಲಭರಿತನಾಗಿದ್ದರೂ ಪೂರ್ವದ ಗಾಳಿಯು ಬರಲು ಕರ್ತನ ಗಾಳಿಯು ಅರಣ್ಯದಿಂದ ಏರಿಬರುವದು, ಆಗ ಅವನ ಬುಗ್ಗೆಯು ಒಣಗಿ ಅವನ ಒರತೆಯು ಬತ್ತಿ ಹೋಗುವದು. ಅವನು ಎಲ್ಲಾ ಪ್ರಿಯ ವಸ್ತುಗಳ ನಿಧಿಯನ್ನು ಹಾಳು ಮಾಡುವನು.

ಪ್ರಕಟನೆ 22:1 ಆಮೇಲೆ ಅವನು ಸ್ಫಟಿಕದಂತೆ ಸ್ವಚ್ಛವಾದ ಮತ್ತು ಶುದ್ಧವಾದ ಜೀವಜಲದ ನದಿ ಯನ್ನು ನನಗೆ ತೋರಿಸಿದನು; ಅದು ದೇವರ ಮತ್ತು ಕುರಿಮರಿಯಾದಾತನ ಸಿಂಹಾಸನದಿಂದ ಹೊರಡುವ ದಾಗಿತ್ತು.

ಯೋಹಾನನು 4:10 ಯೇಸು ಪ್ರತ್ಯುತ್ತರವಾಗಿ ಆಕೆಗೆ--ದೇವರ ದಾನವೇನೆಂಬದೂ ಮತ್ತು--ನನಗೆ ಕುಡಿಯುವದಕ್ಕೆ ಕೊಡು ಎಂದು ನಿನ್ನನ್ನು ಕೇಳಿದಾತನು ಯಾರೆಂಬದೂ ನಿನಗೆ ತಿಳಿದಿದ್ದರೆ ನೀನು ಆತನನ್ನು ಕೇಳುತ್ತಿದ್ದಿ, ಆತನು ನಿನಗೆ ಜೀವಕರವಾದ ನೀರನ್ನು ಕೊಡುತ್ತಿದ್ದನು ಎಂದು ಹೇಳಿದನು.

ಯೋಹಾನನು 4:14 ಆದರೆ ನಾನು ಕೊಡುವ ನೀರನ್ನು ಕುಡಿಯುವವನಿಗೆ ಎಂದಿಗೂ ನೀರ ಡಿಕೆಯಾಗುವದಿಲ್ಲ; ಯಾಕಂದರೆ ನಾನು ಅವನಿಗೆ ಕೊಡುವ ನೀರು ಅವನಲ್ಲಿ ನಿತ್ಯಜೀವಕ್ಕೆ ಉಕ್ಕುವ ನೀರಿನ ಬಾವಿಯಾಗಿರುವದು ಅಂದನು.

ಜ್ಞಾನೋಕ್ತಿಗಳು 13:14 ಮರಣದ ಪಾಶಗ ಳಿಂದ ತಪ್ಪಿಸಿಕೊಳ್ಳುವದಕ್ಕೆ ಜ್ಞಾನವಂತರ ಕಟ್ಟಳೆಯು ಜೀವದ ಬುಗ್ಗೆಯಾಗಿದೆ.

ಜ್ಞಾನೋಕ್ತಿಗಳು 14:27 ಮರಣದ ಪಾಶಗಳಿಂದ ತೊಲಗುವದಕ್ಕೆ ಕರ್ತನ ಭಯವು ಜೀವದ ಬುಗ್ಗೆ.

ಯೆಹೆಜ್ಕೇಲನು 13:17-23 ಇದೇ ರೀತಿ ಮನುಷ್ಯಪುತ್ರನೇ, ತಮ್ಮ ಹೃದಯ

ದೊಳಗಿಂದ ಪ್ರವಾದಿಸುವ ನಿನ್ನ ಜನರ ಕುಮಾರ್ತೆ ಯರಿಗೆ ವಿರೋಧವಾಗಿ ನಿನ್ನ ಮುಖವನ್ನು ಮಾಡಿ, ನೀನು ಅವರಿಗೆ ಪ್ರವಾದಿಸಿ ಹೀಗೆ ಹೇಳು ಎಂದು ದೇವರಾದ ಕರ್ತನು ಹೇಳುತ್ತಾನೆ-- 18 ಪ್ರಾಣಗಳನ್ನು ಬೇಟೆಯಾಡಬೇಕೆಂದು ಎಲ್ಲರ ಮೊಣಕೈಗಳಿಗೆ ದಿಂಡು ಗಳನ್ನು ಹೊಲಿದು ಪ್ರತಿಯೊಂದು ಎತ್ತರದ ತಲೆಗಳಿಗೆ ವಸ್ತ್ರಗಳನ್ನು ಕಟ್ಟುವ ಕುಮಾರ್ತೆಯರಿಗೆ ಅಯ್ಯೋ! ನನ್ನ ಜನರ ಪ್ರಾಣಗಳನ್ನು ಬೇಟೆಯಾಡುವಿರೋ? ನಿಮ್ಮ ಬಳಿಗೆ ಬರುವ ಪ್ರಾಣಗಳನ್ನು ಬದುಕಿಸುವಿರೋ? 19 ಸುಳ್ಳಿಗೆ ಕಿವಿಗೊಡುವ ನನ್ನ ಜನರಿಗೆ ಸುಳ್ಳು ಹೇಳಿ, ಸಾಯದಿರುವವರನ್ನು ಸಾಯಿಸಿ, ಸಾಯುವವರನ್ನು ಬದುಕಿಸಿ, ಒಂದು ಹಿಡಿ ಬಾರ್ಲಿಗೂ ತುಂಡು ರೊಟ್ಟಿಗೂ ನನ್ನನ್ನು ನನ್ನ ಜನರೊಳಗೆ ಅಪವಿತ್ರಪಡಿಸುವಿರೋ? 20 ದೇವರಾದ ಕರ್ತನು ಹೀಗೆ ಹೇಳುತ್ತಾನೆ--ಇಗೋ, ನಿಮ್ಮ ಪ್ರಾಣಗಳನ್ನು ಹಾರಿಸುವದಕ್ಕಾಗಿ ಬೇಟೆಯಾ ಡುವ ದಂಡುಗಳಿಗೆ ವಿರೋಧವಾಗಿದ್ದೇನೆ. ಅವುಗಳನ್ನು ನಿಮ್ಮ ತೋಳುಗಳಿಂದ ಹರಿದುಬಿಡುವೆನು. ನೀವು ಹಾರಿಸುವದಕ್ಕಿರುವ ಬೇಟೆಯಾಡುವ ಪ್ರಾಣಗಳನ್ನು ಬಿಡಿಸುತ್ತೇನೆ. 21 ನಿಮ್ಮ ವಸ್ತ್ರಗಳನ್ನು ಹರಿದು ಬಿಟ್ಟು ನನ್ನ ಜನರನ್ನು ನಿಮ್ಮ ಕೈಯೊಳಗಿಂದ ತಪ್ಪಿಸುತ್ತೇನೆ. ಅವರು ಇನ್ನು ಮೇಲೆ ನಿಮ್ಮ ಕೈಗೆ ಬೇಟೆಯಾಗಿ ಸಿಕ್ಕು ವದಿಲ್ಲ. ನಾನೇ ಕರ್ತನೆಂದು ನೀವು ತಿಳಿದುಕೊಳ್ಳುವಿರಿ. 22 ನಾನು ಯಾವನನ್ನು ದುಃಖಪಡಿಸಲಿಲ್ಲವೋ ಆ ನೀತಿವಂತನ ಹೃದಯಕ್ಕೆ ನೀವು ಸುಳ್ಳಾಡಿ ದುಃಖಪಡಿಸಿ ದ್ದೀರಿ; ದುಷ್ಟನು ತನ್ನ ದುರ್ಮಾರ್ಗವನ್ನು ಬಿಟ್ಟು ಪ್ರಾಣವನ್ನು ಉಳಿಸಿಕೊಳ್ಳದಂತೆ ನೀವು ಅವನ ಕೈಗಳನ್ನು ಬಲಪಡಿಸಿದ್ದೀರಿ. 23 ಆದದರಿಂದ ನೀವು ಇನ್ನು ಮೇಲೆ ವ್ಯರ್ಥವಾದದ್ದನ್ನು ಕಾಣುವದಿಲ್ಲ; ಭವಿಷ್ಯವನ್ನೂ ಕಾಣು ವದಿಲ್ಲ; ಯಾಕಂದರೆ ನಾನು ನನ್ನ ಜನರನ್ನು ನಿಮ್ಮ ಕೈಯೊಳಗಿಂದ ತಪ್ಪಿಸುವೆನು; ನಾನೇ ಕರ್ತನೆಂದು ನೀವು ತಿಳಿದುಕೊಳ್ಳುವಿರಿ.

ಯೆರೆಮಿಯ 21:8 ನೀನು ಈ ಜನಕ್ಕೆ ಹೇಳಬೇಕಾದದ್ದೇನಂದರೆ --ಕರ್ತನು ಹೀಗೆ

ಹೇಳುತ್ತಾನೆ--ಇಗೋ, ನಾನು ಜೀವದ ಮಾರ್ಗವನ್ನೂ ಮರಣದ ಮಾರ್ಗವನ್ನೂ ನಿಮ್ಮ ಮುಂದೆ ಇಡುತ್ತೇನೆ.

ಯೋಬನು 34:22 ದುಷ್ಟತನ ಮಾಡುವವರು ಅಡಗಿ ಕೊಳ್ಳುವ ಹಾಗೆ ಕತ್ತಲೂ ಇಲ್ಲ, ಮರಣದ ನೆರಳೂ ಇಲ್ಲ.

ಕೀರ್ತನೆಗಳು 16:10 ಯಾಕಂದರೆ ನೀನು ನನ್ನ ಆತ್ಮವನ್ನು ನರಕದಲ್ಲಿ ಬಿಟ್ಟುಬಿಡುವದಿಲ್ಲ; ನಿನ್ನ ಪರಿಶುದ್ಧನ ಕೊಳೆಯುವಿಕೆಯನ್ನು ನೋಡ ಗೊಡಿಸುವದಿಲ್ಲ.

ಕೀರ್ತನೆಗಳು 23:4 ಹೌದು, ನಾನು ಮರಣದ ನೆರಳಿನ ಕಣಿವೆಯಲ್ಲಿ ನಡೆದರೂ ಕೇಡಿಗೆ ಭಯಪಡೆನು; ಯಾಕಂದರೆ ನೀನು ನನ್ನ ಸಂಗಡ ಇದ್ದೀ; ನಿನ್ನ ಕೋಲೂ ದೊಣ್ಣೆಯೂ ನನ್ನನ್ನು ಆದರಿಸುತ್ತವೆ.

ಕೀರ್ತನೆಗಳು 30:3 ಓ ಕರ್ತನೇ, ನನ್ನ ಪ್ರಾಣವನ್ನು ಸಮಾಧಿಯಿಂದ ಎತ್ತಿದ್ದೀ; ನಾನು ತಗ್ಗಿಗೆ ಇಳಿಯದಂತೆ ನನ್ನನ್ನು ಜೀವದಲ್ಲಿ ಕಾಪಾಡಿದ್ದೀ.

ಕೀರ್ತನೆಗಳು 49:15 ಆದರೆ ದೇವರು ನನ್ನ ಪ್ರಾಣವನ್ನು ಸಮಾಧಿಯ ಬಲದಿಂದ ವಿಮೋಚನೆ ಮಾಡುವನು, ಆತನು ನನ್ನನ್ನು ಅಂಗೀಕರಿಸುವನು. ಸೆಲಾ.

ಕೀರ್ತನೆಗಳು 56:13 ನನ್ನ ಪ್ರಾಣವನ್ನು ಮರಣದಿಂದ ಬಿಡಿಸಿದ್ದೀ, ಹಾಗೆ ನಾನು ಜೀವಿತರ ಬೆಳಕಿನಲ್ಲಿ ದೇವರ ಮುಂದೆ ನಡೆಯುವ ನನ್ನ ಪಾದಗಳನ್ನು ಬೀಳದಂತೆ ನೀನು ತಪ್ಪಿಸುವದಿಲ್ಲವೋ?

ಕೀರ್ತನೆಗಳು 68:20 ನಮ್ಮ ದೇವರು ರಕ್ಷಣೆಯ ದೇವರಾಗಿದ್ದಾನೆ; ನಮ್ಮ ಕರ್ತನಾದ ದೇವರು ಮರಣದಿಂದ ತಪ್ಪಿಸಲು ಶಕ್ತನಾಗಿದ್ದಾನೆ.

ಕೀರ್ತನೆಗಳು 89:48 ಮರಣವನ್ನು ನೋಡದೆ ಬದುಕುವಂಥ, ಸಮಾಧಿಯ ವಶದಿಂದ ತನ್ನ ಪ್ರಾಣವನ್ನು ತಪ್ಪಿಸಿಕೊಳ್ಳುವಂಥ, ಪುರುಷನು ಯಾರು ಸೆಲಾ.

ಕೀರ್ತನೆಗಳು 102:19,20 ಜನಾಂಗಗಳೂ ರಾಜ್ಯಗಳೂ ಕರ್ತ ನನ್ನು ಸೇವಿಸುವದಕ್ಕೆ ಒಟ್ಟಾಗಿ ಕೂಡಿ ಬರುವಾಗ 20 ಚೀಯೋನಿನಲ್ಲಿ ಕರ್ತನ ಹೆಸರೂ ಯೆರೂಸಲೇಮಿ

ನಲ್ಲಿ ಆತನ ಸ್ತೋತ್ರವೂ ಸಾರಲ್ಪಡುವ ಹಾಗೆ.

ಕೀರ್ತನೆಗಳು 116:8 ನೀನು ನನ್ನ ಪ್ರಾಣ ವನ್ನು ಮರಣಕ್ಕೂ ಕಣ್ಣುಗಳನ್ನು ಕಣ್ಣೀರಿಗೂ ನನ್ನ ಪಾದಗಳು ಬೀಳದಂತೆಯೂ ತಪ್ಪಿಸಿದ್ದೀ.

ಜ್ಞಾನೋಕ್ತಿಗಳು 10:2 ಕೆಟ್ಟತನದ ಸಂಪತ್ತುಗಳು ಪ್ರಯೋಜನವಿಲ್ಲ; ನೀತಿಯು ಮರಣದಿಂದ ಬಿಡಿಸುತ್ತದೆ.

ಯೆಶಾಯ 26:19 ಮೃತರಾದ ನಿನ್ನ ಜನರು ಬದುಕುವರು, ನನ್ನವರ ಹೆಣಗಳು ಏಳುವವು; ದೂಳಿನ ನಿವಾಸಿಗಳೇ; ಎಚ್ಚತ್ತು ಹರ್ಷ ಸ್ವರಗೈಯಿರಿ! ನೀನು ಸುರಿಯುವ ಇಬ್ಬನಿಯು ಇಬ್ಬನಿಯ ಸಸ್ಯಗಳಂತಿವೆ. ಭೂಮಿಯು ಸತ್ತವರನ್ನು ಹೊರಪಡಿಸುವದು.

ಯೋಹಾನನು 5:28,29 ಇದಕ್ಕೆ ಆಶ್ಚರ್ಯಪಡ ಬೇಡಿರಿ; ಒಂದು ಕಾಲ ಬರುತ್ತದೆ; ಆಗ ಸಮಾಧಿಗಳಲ್ಲಿ ರುವವರೆಲ್ಲರೂ ಆತನ ಧ್ವನಿಯನ್ನು ಕೇಳಿ ಹೊರಗೆ ಬರುವರು, 29 ಒಳ್ಳೇದನ್ನು ಮಾಡಿದವರು ಜೀವದ ಪುನರುತ್ಥಾನವನ್ನೂ ಕೆಟ್ಟದ್ದನ್ನು ಮಾಡಿದವರು ತೀರ್ಪಿನ ಪುನರುತ್ಥಾನವನ್ನೂ ಹೊಂದುವರು.

ಯೋಹಾನನು 10:28 ನಾನು ಅವುಗಳಿಗೆ ನಿತ್ಯಜೀವವನ್ನು ಕೊಡುತ್ತೇನೆ; ಅವು ಎಂದಿಗೂ ನಾಶವಾಗುವದಿಲ್ಲ; ಇಲ್ಲವೆ ಅವು ಗಳನ್ನು ಯಾವನೂ ನನ್ನ ಕೈಯೊಳಗಿಂದ ಕಸಕೊಳ್ಳ ಲಾರನು.

ಯೋಹಾನನು 11:43,44 ಆತನು ಹೀಗೆ ಮಾತನಾಡಿದ ಮೇಲೆ--ಲಾಜರನೇ, ಹೊರಗೆ ಬಾ ಎಂದು ಗಟ್ಟಿಯಾದ ಸ್ವರದಿಂದ ಕೂಗಿದನು. 44 ಆಗ ಪ್ರೇತ ವಸ್ತ್ರಗಳಿಂದ ಕೈಕಾಲುಗಳನ್ನು ಕಟ್ಟಿದ್ದ ಆ ಸತ್ತವನು ಹೊರಗೆ ಬಂದನು. ಅವನ ಮುಖವು ವಸ್ತ್ರ ದಿಂದ ಸುತ್ತಲ್ಪಟ್ಟಿತ್ತು; ಯೇಸು ಅವರಿಗೆ--ಅವನನ್ನು ಬಿಚ್ಚಿರಿ, ಅವನು ಹೋಗಲಿ ಎಂದು ಹೇಳಿದನು.

ಯೋಹಾನನು 12:17 ಇದಲ್ಲದೆ ಆತನು ಲಾಜರನನ್ನು ಸಮಾ ಧಿಯೊಳಗಿಂದ ಕರೆದು

ಅವನನ್ನು ಸತ್ತವರೊಳಗಿಂದ ಎಬ್ಬಿಸಿದಾಗ ಆತನ ಸಂಗಡ ಇದ್ದ ಜನರು ಸಾಕ್ಷಿಕೊಟ್ಟರು.

ಯೋಹಾನನು 17:2 ನೀನು ಆತನಿಗೆ ಯಾರಾರನ್ನು ಕೊಟ್ಟಿದ್ದೀಯೋ ಅವರಿಗೆ ಆತನು ನಿತ್ಯಜೀವವನ್ನು ಕೊಡಬೇಕೆಂದು ಆತನಿಗೆ ಎಲ್ಲಾ ಮನುಷ್ಯರ ಮೇಲೆ ಅಧಿಕಾರವನ್ನು ಕೊಟ್ಟಿದ್ದೀ.

1 ಕೊರಿಂಥದವರಿಗೆ 15:19-26 ಈ ಜೀವದಲ್ಲಿ ಮಾತ್ರ ನಾವು ಕ್ರಿಸ್ತನಲ್ಲಿ ನಿರೀಕ್ಷೆಯಿಟ್ಟುಕೊಂಡವ ರಾಗಿದ್ದರೆ ನಾವು ಎಲ್ಲಾ ಮನುಷ್ಯರಿಗಿಂತಲೂ ನಿರ್ಭಾಗ್ಯರೇ ಸರಿ. 20 ಆದರೆ ಈಗ ಕ್ರಿಸ್ತನು ಸತ್ತವರೊಳಗಿಂದ ಎದ್ದು ಬಂದು ನಿದ್ರೆಹೋದವರಲ್ಲಿ ಪ್ರಥಮಫಲವಾದನು. 21 ಮನುಷ್ಯನ ಮೂಲಕ ಮರಣವುಂಟಾದ ಕಾರಣ ಮನುಷ್ಯನ ಮೂಲಕವೇ ಸತ್ತವರಿಗೆ ಪುನರುತ್ಥಾನ ವುಂಟಾಗುವದು. 22 ಯಾವ ಪ್ರಕಾರ ಆದಾಮನಲ್ಲಿ ಎಲ್ಲರೂ ಸಾಯುವವರಾದರೋ ಅದೇ ಪ್ರಕಾರ ಕ್ರಿಸ್ತನಲ್ಲಿ ಎಲ್ಲರೂ ಜೀವಿತರಾಗುವರು. 23 ಆದರೆ ಪ್ರತಿಯೊಬ್ಬನು ತನ್ನ ತನ್ನ ತರಗತಿಯಲ್ಲಿ ಇರುವನು; ಕ್ರಿಸ್ತನು ಪ್ರಥಮ ಫಲ, ತರುವಾಯ ಕ್ರಿಸ್ತನ ಬರೋಣದಲ್ಲಿ ಆತನವರು. 24 ಆಮೇಲೆ ಆತನು ಬೇರೆ ಎಲ್ಲಾ ದೊರೆತನವನ್ನೂ ಎಲ್ಲಾ ಅಧಿಕಾರವನ್ನೂ ಬಲವನ್ನೂ ನಿವೃತ್ತಿಮಾಡಿ ತಂದೆಯಾಗಿರುವ ದೇವರಿಗೆ ರಾಜ್ಯವನ್ನು ಒಪ್ಪಿಸಿ ಕೊಡುವಾಗ ಸಮಾಪ್ತಿ ಯಾಗುವದು. 25 ಯಾಕಂದರೆ ತಾನು ಎಲ್ಲಾ ವಿರೋಧಿ ಗಳನ್ನು ತನ್ನ ಪಾದಗಳ ಕೆಳಗೆ ಹಾಕುವ ತನಕ ಆತನು ಆಳುವದು ಅವಶ್ಯ. 26 ನಾಶವಾಗಲಿರುವ ಕಡೇ ಶತ್ರುವು ಮರಣ.

2 ಕೊರಿಂಥದವರಿಗೆ 1:9,10 ಆದರೆ ಮರಣವಾಗು ತ್ತದೆಂಬ ನಿರ್ಣಯವು ನಮ್ಮೊಳಗೆ ಉಂಟಾಯಿತು; ನಾವು ನಮ್ಮ ಮೇಲೆ ಭರವಸವಿಟ್ಟುಕೊಳ್ಳದೆ ಸತ್ತವರನ್ನು ಎಬ್ಬಿಸುವ ದೇವರ ಮೇಲೆಯೇ ಭರವಸವಿಡುವವ ರಾಗಬೇಕೆಂದು ಹೀಗಾಯಿತು. 10 ಆತನು ನಮ್ಮನ್ನು ಎಂಥಾ ಭಯಂಕರವಾದ ಮರಣದಿಂದ ತಪ್ಪಿಸಿದ್ದಾನೆ, ಮತ್ತು

ತಪ್ಪಿಸುತ್ತಾನೆ, ಇನ್ನು ಮುಂದೆಯೂ ಆತನು ನಮ್ಮನ್ನು ತಪ್ಪಿಸುವನೆಂದು ನಾವು ಆತನಲ್ಲಿ ಭರವಸೆಯುಳ್ಳವರಾಗಿದ್ದೇವೆ.

2 ಕೊರಿಂಥದವರಿಗೆ 3:6 ಆತನು ನಮ್ಮನ್ನು ಸಹ ಹೊಸ ಒಡಂಬಡಿಕೆಗೆ ಸಮರ್ಥರಾದ ಸೇವಕರನ್ನಾಗಿ ಮಾಡಿದ್ದಾನೆ; ಅಕ್ಷರಕ್ಕನುಸಾರವಾಗಿ ಅಲ್ಲ; ಆತ್ಮನಿಗನುಸಾರವಾಗಿಯೇ. ಯಾಕಂದರೆ ಅಕ್ಷರವು ಮರಣ ವನ್ನುಂಟು ಮಾಡುತ್ತದೆ; ಆತ್ಮವು ಜೀವವನ್ನುಂಟು ಮಾಡುತ್ತದೆ.

ಕೊಲೊಸ್ಸೆಯವರಿಗೆ 1:21,22 ಇದಲ್ಲದೆ ನೀವು ಹಿಂದಿನ ಕಾಲದಲ್ಲಿ ಅನ್ಯರೂ ದುಷ್ಕೃತ್ಯಗಳಿಂದ ದ್ವೇಷ ಮನಸ್ಸುಳ್ಳವರೂ ಆಗಿದ್ದಿರಿ. ಆದಾಗ್ಯೂ ಈಗ ಆತನು ನಿಮ್ಮನ್ನು ಸಂಧಾನಪಡಿಸಿ ಕೊಂಡಿದ್ದಾನೆ. 22 ತನ್ನ ಸ್ಥೂಲ ದೇಹದಲ್ಲಿ ಉಂಟಾದ ಮರಣದ ಮೂಲಕ ನಿಮ್ಮನ್ನು ಪರಿಶುದ್ಧರನ್ನಾಗಿಯೂ ನಿರ್ದೋಷಿಗಳನ್ನಾಗಿಯೂ ನಿರಪರಾಧಿಗಳನ್ನಾಗಿಯೂ ತನ್ನ ಸನ್ನಿಧಿಯಲ್ಲಿ ನಿಲ್ಲಿಸಬೇಕೆಂದಿದ್ದಾನೆ.

ಇಬ್ರಿಯರಿಗೆ 2:9 ಆದರೂ ದೂತರರಿಗಿಂತ ಸ್ವಲ್ಪ ಕಡಿಮೆಯಾಗಿ ಮಾಡಲ್ಪಟ್ಟ ಒಬ್ಬಾತನು ಅಂದರೆ ಯೇಸುವು, ಪ್ರಭಾವವನ್ನೂ ಮಾನವನ್ನೂ ಕಿರೀಟವಾಗಿ ಹೊಂದಿರುವದನ್ನು ನಾವು ನೋಡುತ್ತೇವೆ; ಆತನು ಮೃತಪಟ್ಟದ್ದರಿಂದಲೇ ಮಾನ ಪ್ರಭಾವಗಳನ್ನು ಹೊಂದಿದನು; ಆತನು ದೇವರ ಕೃಪೆ ಯಿಂದ ಎಲ್ಲರಿಗೋಸ್ಕರ ಮರ

ಇಬ್ರಿಯರಿಗೆ 2:14,15 ಇದಲ್ಲದೆ ಮಕ್ಕಳು ರಕ್ತಮಾಂಸಗಳಲ್ಲಿ ಪಾಲುಗಾರರಾದದರಿಂದ ಆತನು ಸಹ ಅವರಂತೆಯೇ ಆದನು; ತನ್ನ ಮರಣದಿಂದಲೇ ಮರಣಾಧಿಕಾರಿಯನ್ನು ಅಂದರೆ ಸೈತಾನನನ್ನು ನಾಶ ಮಾಡುವದಕ್ಕೂ 15 ಮರಣ ಭಯದ ದೆಸೆಯಿಂದ ತಮ್ಮ ಜೀವಮಾನದಲ್ಲೆಲ್ಲಾ ದಾಸತ್ವದೊಳಗಿದ್ದವರನ್ನು ಬಿಡಿಸುವದಕ್ಕೂ ಅವರಂತೆ ರಕ್ತಮಾಂಸಗಳಲ್ಲಿ ಭಾಗ ವಹಿಸಿದನು.

ಇಬ್ರಿಯರಿಗೆ 11:5 ಹನೋಕನು ಮರಣವನ್ನು ಅನುಭವಿಸದೆ ಒಯ್ಯ ಲ್ಪಟ್ಟದ್ದು

ನಂಬಿಕೆಯಿಂದಲೇ; ಅವನನ್ನು ದೇವರು ತೆಗೆದುಕೊಂಡು ಹೋದದರಿಂದ ಅವನು ಯಾರಿಗೂ ಸಿಕ್ಕಲಿಲ್ಲ; ಅವನು ಒಯ್ಯಲ್ಪಡುವದಕ್ಕಿಂತ ಮೊದಲು ದೇವರನ್ನು ಮೆಚ್ಚಿಸುವವನಾಗಿದ್ದನೆಂದು ಸಾಕ್ಷಿ ಉಂಟು.

1 ಪೇತ್ರನು 3:18 ಕ್ರಿಸ್ತನು ಸಹ ನೀತಿವಂತ ನಾಗಿದ್ದು ಅನೀತಿವಂತರಾದ ನಮ್ಮನ್ನು ದೇವರ ಬಳಿಗೆ ತರುವದಕ್ಕಾಗಿ ಪಾಪನಿವಾರಣೆಗೋಸ್ಕರ ಒಂದೇ ಸಾರಿ ಬಾಧೆಪಟ್ಟು ಶರೀರದಲ್ಲಿ ಕೊಲ್ಲಲ್ಪಟ್ಟನು, ಆತ್ಮನಿಂದ ಬದುಕುವವನಾದನು.

2 ಪೇತ್ರನು 1:3 ತನ್ನ ಮಹಿಮೆಗಾಗಿಯೂ ಗುಣಾತಿಶಯಕ್ಕಾಗಿಯೂ ನಮ್ಮನ್ನು ಕರೆದಾತನ ವಿಷಯವಾದ ಪರಿಜ್ಞಾನದ ಮೂಲಕವಾಗಿ ಆತನ ದೈವಶಕ್ತಿಯು ಜೀವಕ್ಕೂ ಭಕ್ತಿಗೂ ಬೇಕಾದದ್ದೆಲ್ಲವುಗಳನ್ನು ನಮಗೆ ದಯಪಾಲಿಸಿತು.

1 ಯೋಹಾನನು 3:14 ನಾವಂತೂ ಸಹೋದರರನ್ನು ಪ್ರೀತಿಸುವವರಾಗಿರುವದರಿಂದ ಮರಣದಿಂದ ಪಾರಾಗಿ ಜೀವದಲ್ಲಿ ಸೇರಿದ್ದೇವೆಂಬದು ನಮಗೆ ಗೊತ್ತಾಗಿದೆ. ತನ್ನ ಸಹೋದರನನ್ನು ಪ್ರೀತಿಸದೆ ಇರುವವನು ಮರಣದಲ್ಲೇ ಇದ್ದಾನೆ.

1 ಯೋಹಾನನು 5:11 ಆ ಸಾಕ್ಷಿ ಯಾವದಂದರೆ ದೇವರು ನಮಗೆ ನಿತ್ಯಜೀವವನ್ನು ಅನುಗ್ರಹಿಸಿದನು.ಈ ಜೀವವು ಆತನ ಮಗನಲ್ಲಿ ಅದೆ ಎಂಬದೇ.

ಪ್ರಕಟನೆ 21:6 ಇದಲ್ಲದೆ ಆತನು ನನಗೆ--ಎಲ್ಲಾ ಮುಗಿಯಿತು. ನಾನು ಅಲ್ಫಾವೂ ಓಮೆಗವೂ ಆದಿಯೂ ಅಂತ್ಯವೂ ಆಗಿದ್ದೇನೆ. ದಾಹವುಳ್ಳವನಿಗೆ ಜೀವದ ನೀರಿನ ಬುಗ್ಗೆಯಿಂದ ನಾನು ನೀರನ್ನು ಉಚಿತವಾಗಿ ಕೊಡುವೆನು.

**Pastor T. John Franklin**
**Church of Salvation, Healing, and Deliverance**
**COS-HAD.org**